**Akashvani: Bangalore**
**Regional Bulletin In Kannada**
**18.09.2026: 14.30hrs**

**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**ಮುಖ್ಯಾಂಶಗಳು :**

1. ಮುಖ್ಯಮಂತ್ರಿ ಅಧ್ಯಕ್ಷತೆಯಲ್ಲಿ ಮಂಗಳೂರಿನಲ್ಲಿ ಸಚಿವ ಸಂಪುಟ ಸಭೆ ಪ್ರಗತಿಯಲ್ಲಿ
2. ಕರಾವಳಿ ಪ್ರವಾಸೋದ್ಯಮ ಕುರಿತಂತೆ ಸಂಪುಟ ಸಭೆಯಲ್ಲಿ ಚರ್ಚೆ - ಉಪಮುಖ್ಯಮಂತ್ರಿ ಡಾ. ಜಿ. ಪರಮೇಶ್ವರ್
3. ಬೆಂಗಳೂರಿನ ಎಚ್‌ಎಎಲ್‌ನಲ್ಲಿಂದು ವಾಯುಪಡೆಗೆ ಲಘು ಯುದ್ಧ ವಿಮಾನ, ನಾಗರಿಕ ಹೆಲಿಕಾಪ್ಟರ್ ಹಸ್ತಾಂತರಿಸಲಿರುವ ರಕ್ಷಣಾ ಸಚಿವ ರಾಜನಾಥ್ ಸಿಂಗ್
4. ಹಾವೇರಿ ಜಿಲ್ಲೆಯಲ್ಲಿ ನಿಯಮ ಉಲ್ಲಘಿಂಸಿ ಗಣಿಗಾರಿಕೆ; ೪೬ ಗುತ್ತಿಗೆದಾರರಿಗೆ ೧೬ ಕೋಟಿ ೩೧ ಲಕ್ಷ ರೂಪಾಯಿ ದಂಡ ವಿಧಿಸಿದ ಗಣಿ ಇಲಾಖೆ
5. ಮೈಸೂರಿನ ಟಿ. ನರಸೀಪುರದಲ್ಲಿ ಬಿಜೆಪಿ ಶೋಭಾಯಾತ್ರೆ; ಜಿಲ್ಲಾಡಳಿತದಿಂದ ಬಿಗಿ ಭದ್ರತೆ

***********

ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅಧ್ಯಕ್ಷತೆಯಲ್ಲಿ ಮಂಗಳೂರಿನ ಪಡೀಲ್‌ನಲ್ಲಿರುವ ಪ್ರಜಾಸೌಧದಲ್ಲಿ ಸಚಿವ ಸಂಪುಟ ಸಭೆ ನಡೆಯುತ್ತಿದೆ. ಇದೇ ಮೊದಲ ಬಾರಿಗೆ ಉಡುಪಿ ಸೇರಿದಂತೆ ಕರಾವಳಿ ಭಾಗದ ಸಮಗ್ರ ಅಭಿವೃದ್ಧಿಯ ನೆಲೆಯಲ್ಲಿ ಸಚಿವ ಸಂಪುಟ ಸಭೆ ನಡೆಯುತ್ತಿದೆ. ಇಂದಿನ ಸಭೆಯಲ್ಲಿ ತುಳು ಭಾಷೆಗೆ ಅಧಿಕೃತ ಸ್ಥಾನಮಾನ ಹಾಗೂ ಕರಾವಳಿ ಪ್ರವಾಸೋದ್ಯಮ ಅಭಿವೃದ್ಧಿಯ ಕುರಿತು ಪ್ರಮುಖ ನಿರ್ಧಾರ ಕೈಗೊಳ್ಳುವ ಸಾಧ್ಯತೆ ಇದೆ. ಇದಕ್ಕೂ ಮೊದಲು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ಸರ್ಕೀಟ್ ಹೌಸ್ ಬಳಿಯ ಯುದ್ಧ ಸ್ಮಾರಕಕ್ಕೆ ಭೇಟಿ ನೀಡಿ, ಪುಷ್ಪನಮನ ಸಲ್ಲಿಸಿದರು. ಕದ್ರಿ ಮಂಜುನಾಥ ಸ್ವಾಮಿ ದೇವಾಲಯಕ್ಕೆ ತೆರಳಿ, ಪೂಜೆ ಸಲ್ಲಿಸಿದ ಅವರು, ಮಂಗಳೂರು ಮೂಲದ ಸಾಮಾಜಿಕ ಜಾಲತಾಣದ ಪ್ರಮುಖರೊಂದಿಗೆ ಸಂವಾದ ನಡೆಸಿದರು. ಬಳಿಕ ವಿಶೇಷ ತೆರೆದ ಅಂಬಾರಿ ಬಸ್‌ನಲ್ಲಿ ಮುಖ್ಯಮಂತ್ರಿ ಹಾಗೂ ಸಚಿವರನ್ನು ಪಂಪ್‌ವೆಲ್ ವೃತ್ತದಿಂದ ಮೆರವಣಿಗೆಯಲ್ಲಿ ಪ್ರಜಾಸೌಧಕ್ಕೆ ಕರೆತರಲಾಯಿತು. ಈ ನಡುವೆ ಸುದ್ದಿಗಾರರೊಂದಿಗೆ ಮಾತನಾಡಿದ ಮುಖ್ಯಮಂತ್ರಿ, ನಾವು ಜನರ ಬದುಕಿನ ಮೇಲೆ ರಾಜಕಾರಣ ಮಾಡುವವರೇ ಹೊರತು, ಜನರ ಬಾವನೆ ಮೇಲೆ ರಾಜಕಾರಣ ಮಾಡುವುದಿಲ್ಲ ಎಂದು ತಿಳಿಸಿದ್ದಾರೆ. ಮಂಗಳೂರಿನ ಅಭಿವೃದ್ಧಿಗೆ ಎಲ್ಲಾ ರೀತಿಯ ಸಹಕಾರ ನೀಡಲಾಗುವುದು ಎಂದು ಭರವಸೆ ನೀಡಿದ್ದಾರೆ.

***********

ಕೇರಳ ಹಾಗೂ ಗೋವಾದಂತಹ ಪ್ರಮುಖ ಪ್ರವಾಸೋದ್ಯಮ ತಾಣಗಳಿಗೆ ಸಮಾನವಾಗಿ ರಾಜ್ಯದ ಕರಾವಳಿ ಪ್ರದೇಶವನ್ನು ಅಭಿವೃದ್ಧಿಪಡಿಸುವ ಮಾರ್ಗಸೂಚಿಯನ್ನು ರೂಪಿಸಲು ಸರ್ಕಾರ ನಿರ್ಧರಿಸಿದೆ ಎಂದು ಉಪಮುಖ್ಯಮಂತ್ರಿ ಡಾ ಜಿ. ಪರಮೇಶ್ವರ್ ತಿಳಿಸಿದ್ದಾರೆ. ಉಡುಪಿ ಜಿಲ್ಲೆಯ ಕಾಪುವಿನಲ್ಲಿರುವ ಮಂಗಳೂರು ವಿಶ್ವವಿದ್ಯಾನಿಲಯದ ಸ್ನಾತಕೋತ್ತರ ಅಧ್ಯಯನ ಮತ್ತು ಅತ್ಯಾಧುನಿಕ ಸಂಶೋಧನಾ ಕೇಂದ್ರದ ಕಟ್ಟಡ ಪರಿಶೀಲಿಸಿದ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕರಾವಳಿ ಭಾಗವನ್ನು ಕೇರಳ ಹಾಗೂ ಗೋವಾ ರಾಜ್ಯಗಳು ಪರಿಣಾಮಕಾರಿಯಾಗಿ ಬಳಸಿಕೊಂಡಿವೆ. ಇದೇ ರೀತಿ ರಾಜ್ಯದಲ್ಲಿಯೂ ಪ್ರವಾಸೋದ್ಯಮ ನೀತಿ ಕುರಿತಂತೆ ಸಂಪುಟ ಸಭೆಯಲ್ಲಿ ಚರ್ಚಿಸಲಾಗುವುದು ಎಂದು ತಿಳಿಸಿದ್ದಾರೆ. ಇದೇ ವೇಳೆ ಕರಾವಳಿ ಭಾಗದಲ್ಲಿ ಉತ್ತಮ ಕ್ರೀಡಾಂಗಣ ವ್ಯವಸ್ಥೆ ಕಲ್ಪಿಸುವ ಕುರಿತಂತೆ ಸಚಿವ ಸಂಪುಟ ಸಭೆಯಲ್ಲಿ ಚರ್ಚಿಸಲಾಗುವುದು ಎಂದು ಹೇಳಿದ್ದಾರೆ.

***********

ಮಂಗಳೂರು ಜಿಲ್ಲಾ ಕಾರಾಗೃಹದ ಸುತ್ತಮುತ್ತಲಿನ ಪ್ರದೇಶಗಳಲ್ಲಿ ಮೊಬೈಲ್ ನೆಟ್‌ವರ್ಕ್ ಸೇವೆಗಳಲ್ಲಿ ವ್ಯತ್ಯಯ ಉಂಟಾಗುತ್ತಿರುವ ಕುರಿತು ಸಾರ್ವಜನಿಕರಿಂದ ದೂರುಗಳು ಬಂದಿರುವ ಹಿನ್ನೆಲೆಯಲ್ಲಿ, ಸಮಸ್ಯೆಯನ್ನು ಪರಿಹರಿಸಲು ಅಗತ್ಯ ತಾಂತ್ರಿಕ ಕ್ರಮ ಕೈಗೊಳ್ಳಲಾಗುತ್ತಿದೆ ಎಂದು ಗೃಹ ಸಚಿವ ಪ್ರಿಯಾಂಕ್ ಖರ್ಗೆ ತಿಳಿಸಿದ್ದಾರೆ. ಈ ಕುರಿತಂತೆ ಪತ್ರಿಕಾ ಪ್ರಕಟಣೆ ಹೊರಡಿಸಿರುವ ಅವರು, ಈಗಾಗಲೇ ಜಂಟಿ ತಾಂತ್ರಿಕ ಸಮೀಕ್ಷೆ ನಡೆಸಲಾಗಿದೆ. ಸಮೀಕ್ಷೆಯ ಆಧಾರದ ಮೇಲೆ ಸಂಬಂಧಪಟ್ಟ ಸಂಸ್ಥೆಯು ಕಾರಾಗೃಹದ ಭದ್ರತಾ ಅಗತ್ಯತೆಗಳಿಗೆ ಅನುಗುಣವಾಗಿ ಆಂಟೆನಾಗಳ ವಿನ್ಯಾಸ ಹಾಗೂ ಜಾಮರ್‌ಗಳ ಸಾಮರ್ಥ್ಯವನ್ನು ಸರಿಹೊಂದಿಸುವ ಕ್ರಮ ಕೈಗೊಂಡಿದೆ ಎಂದು ಹೇಳಿದ್ದಾರೆ.

***********

ಎಚ್‌ಎಎಲ್ ಸಂಸ್ಥೆ ತಯಾರಿಸಿದ ವಿವಿಧ ಲಘು ಯುದ್ಧ ವಿಮಾನ ಹಾಗೂ ನಾಗರಿಕ ಹೆಲಿಕಾಪ್ಟರ್‌ಗಳನ್ನು ರಕ್ಷಣಾ ಸಚಿವ ರಾಜನಾಥ್ ಸಿಂಗ್ ಬೆಂಗಳೂರಿನಲ್ಲಿಂದು ಭಾರತೀಯ ವಾಯುಪಡೆ ಮತ್ತು ಪವನ್ ಹನ್ಸ್ ಸಂಸ್ಥೆಗೆ ಹಸ್ತಾಂತರಿಸಲಿದ್ದಾರೆ. ಕಾರ್ಯಕ್ರಮದಲ್ಲಿ ಎರಡು ತೇಜಸ್ ತರಬೇತಿ ವಿಮಾನಗಳು ಹಾಗೂ ಮೊದಲ ಎಫ್‌ಟಿಟಿ ೪೦ ತರಬೇತಿ ವಿಮಾನವನ್ನು ವಾಯುಪಡೆಗೆ ಹಸ್ತಾಂತರಿಸಲಿದ್ದಾರೆ. ಇದರ ಜೊತೆಗೆ ದ್ರುವ್ ಎನ್ ಜಿ ಹೆಲಿಕಾಪ್ಟರ್‌ಗಳನ್ನು ಪವನ್ ಹನ್ಸ್ ಸಂಸ್ಥೆಗೆ ಹಸ್ತಾಂತರಿಸಲಿದ್ದಾರೆ. ನಾಗರಿಕ ವಿಮಾನಯಾನ ವಲಯಕ್ಕೆ ಸೇರ್ಪಡೆಯಾಗುತ್ತಿರುವ ದ್ರುವ್ ಎನ್‌ಜಿ, ಎ.ಎಸ್-೪ ನಿಯಮಾವಳಿಗಳಿಗೆ ಅನುಗುಣವಾಗಿ ಭಾರತದಲ್ಲೇ ಸಂಪೂರ್ಣ ದೇಶೀಯವಾಗಿ ನಿರ್ಮಾಣಗೊಂಡ ಮೊದಲ ನಾಗರಿಕ ಹೆಲಿಕಾಪ್ಟರ್ ಆಗಿದೆ. ೨೦೨೩-೨೪ರ ವೇಳೆಗೆ ಎಚ್.ಎ.ಎಲ್, ವಾಯುಪಡೆಗೆ ೨೯ ಎಂ.ಕೆ-೧ಎ ಎರಡು ಆಸನದ ವಿಮಾನಗಳನ್ನು ತಲುಪಿಸುವ ಗುರಿ ಹೊಂದಿದೆ.

***********

ಕಲಬುರಗಿಯಲ್ಲಿ ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಒಂಬತ್ತು ಅಡಿ ಎತ್ತರದ ಪ್ರತಿಮೆಯನ್ನು ತೆರವುಗೊಳಿಸಿರುವುದಕ್ಕೆ ಯಾವುದೇ ರಾಜಕೀಯ ಕಾರಣವಿಲ್ಲ ಎಂದು ಸಣ್ಣ ನೀರಾವರಿ ಸಚಿವ ಅಜಯ್ ಸಿಂಗ್ ತಿಳಿಸಿದ್ದಾರೆ. ಮಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು ಅಗತ್ಯ ಅನುಮತಿಯಿಲ್ಲದೆ ಪ್ರತಿಮೆ ಸ್ಥಾಪಿಸಿದ್ದರಿಂದ ತೆರವುಗೊಳಿಸಲಾಗಿದೆ ಎಂದು ಸ್ಪಷ್ಟಪಡಿಸಿದ್ದಾರೆ. ಜಿಲ್ಲಾಡಳಿತ ಹಾಗೂ ನಗರ ಪಾಲಿಕೆಯಿಂದ ಅಗತ್ಯ ಅನುಮತಿ ಪಡೆಯಲಾಗಿಲ್ಲ ಎಂದು ಅಧಿಕಾರಿಗಳು ಕಂಡುಕೊಂಡ ಬಳಿಕ ಬಿಗಿ ಪೊಲೀಸ್ ಭದ್ರತೆಯ ನಡುವೆ ಕಲಬುರಗಿ ಮಹಾನಗರ ಪಾಲಿಕೆ ಪ್ರತಿಮೆಯನ್ನು ತೆರವುಗೊಳಿಸಿತ್ತು.

***********

ಹಾವೇರಿ ಜಿಲ್ಲೆಯ ಪರವಾನಗಿ ನಿಯಮಗಳನ್ನು ಉಲ್ಲಂಘಿಸಿ ಅಕ್ರಮವಾಗಿ ಕಲ್ಲು ಗಣಿಗಾರಿಕೆ ನಡೆಸಿದ್ದ ಆರೋಪದಡಿ ಜಿಲ್ಲೆಯ ೪೬ ಕಲ್ಲು ಕ್ವಾರಿ- ಕ್ರಷರ್ ಗುತ್ತಿಗೆದಾರರಿಗೆ ೨೬ ಕೋಟಿ ೩೨ ಲಕ್ಷ ರೂಪಾಯಿ ದಂಡ ವಿಧಿಸಲಾಗಿದೆ. ದಂಡ ಪಾವತಿಗೆ ೬ ತಿಂಗಳ ಗಡುವು ನೀಡಲಾಗಿದೆ ಎಂದು ಗಣಿ ಮತ್ತು ಭೂ ವಿಜ್ಞಾನ ಇಲಾಖೆಯ ಹಿರಿಯ ಅಧಿಕಾರಿ ಟಿ.ವಿ. ಪುಷ್ಪಾ ತಿಳಿಸಿದ್ದಾರೆ. ಹಾವೇರಿ, ಬ್ಯಾಡಗಿ, ರಾಣೆಬೆನ್ನೂರು, ಶಿಗ್ಗಾವಿ, ಹಾನಗಲ್ ತಾಲ್ಲೂಕು ಸೇರಿದಂತೆ ಹಲವು ಕಡೆಗಳಲ್ಲಿ ಕಲ್ಲು ಕ್ವಾರಿ ಹಾಗೂ ಕ್ರಷರ್ ನಡೆಸಲು ೬೮ ಗುತ್ತಿಗೆದಾರರು ಪರವಾನಗಿ ಪಡೆದುಕೊಂಡಿದ್ದಾರೆ. ಈ ಪೈಕಿ ೨೨ ಗುತ್ತಿಗೆದಾರರು ಪರವಾನಗಿ ನಿಯಮಗಳ ಅನ್ವಯ ಗಣಿಗಾರಿಕೆ ನಡೆಸಿದ್ದಾರೆ. ೪೬ ಗುತ್ತಿಗೆದಾರರು ಪರವಾನಗಿ ನಿಯಮಗಳನ್ನು ಉಲ್ಲಂಘಿಸಿ ಅಕ್ರಮವಾಗಿ ಗಣಿಗಾರಿಕೆ ನಡೆಸಿ ಕಲ್ಲು ಸಾಗಣೆ ಮಾಡಿರುವುದು ಪತ್ತೆಯಾಗಿದೆ. ಈ ಹಿನ್ನೆಲೆಯಲ್ಲಿ ಗುತ್ತಿಗೆದಾರರಿಗೆ ದಂಡ ವಿಧಿಸಲಾಗಿದೆ ಎಂದು ಸ್ಪಷ್ಟಪಡಿಸಿದ್ದಾರೆ.

***********

ಮೈಸೂರಿನ ಟಿ.ನರಸೀಪುರದಲ್ಲಿ ಇನ್ಸ್‌ಪೆಕ್ಟರ್ ಧನಂಜಯ್ ಹೇಳಿಕೆ ವಿರೋಧಿಸಿ ಬಿಜೆಪಿ ಶೋಭಾಯಾತ್ರೆ ಹಮ್ಮಿಕೊಂಡಿದೆ. ಈ ನಡುವೆ ಸೌಹಾರ್ದತೆ ಕಡೆಗೆ ಸಾಮರಸ್ಯದ ನಡಿಗೆ ನಡೆಯುತ್ತಿದೆ. ಪಟ್ಟಣದ ಭಗವಾನ್ ಟಾಕೀಸ್ ವೃತ್ತದಿಂದ ಮೆರವಣಿಗೆ ಪ್ರಾರಂಭವಾಗಿದ್ದು ನಡಿಗೆಯಲ್ಲಿ ನೂರಾರು ಮಂದಿ ಹೆಜ್ಜೆ ಹಾಕಿದ್ದಾರೆ. ಟಿ.ನರಸೀಪುರದಲ್ಲಿ ಇಂದು ಎರಡು ಯಾತ್ರೆಗಳು ನಡೆಯುತ್ತಿರುವ ಹಿನ್ನೆಲೆಯಲ್ಲಿ ಬಿಗಿ ಪೊಲೀಸ್ ಬಂದೋಬಸ್ತ್ ಏರ್ಪಡಿಸಲಾಗಿದೆ. ಅನಗತ್ಯ ಗೊಂದಲ ಸೃಷ್ಟಿಸುವವರ ವಿರುದ್ಧ ಕ್ರಮ ಕೈಗೊಳ್ಳಲಾಗುವುದು ಎಂದು ಮೈಸೂರು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಮಲ್ಲಿಕಾರ್ಜುನ ಬಾಲದಂಡಿ ಎಚ್ಚರಿಕೆ ನೀಡಿದ್ದಾರೆ.

***********

ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು, ಸಾರ್ವಜನಿಕ ಸೇವೆಯಲ್ಲಿ ೨೫ ವರ್ಷ ಪೂರ್ಣಗೊಳಿಸಿದ ಹಿನ್ನೆಲೆಯಲ್ಲಿ ದೇಶಾದ್ಯಂತ ಸೇವಾ ಸಂಕಲ್ಪ ಅಭಿಯಾನ ಹಮ್ಮಿಕೊಳ್ಳಲಾಗಿದೆ. ಇದರ ಭಾಗವಾಗಿ ಹಲವು ವಲಯಗಳಲ್ಲಿ ಕೈಗೊಂಡ ಮಹತ್ವದ ಸುಧಾರಣೆಗಳ ಕುರಿತ ಸರಣಿಯನ್ನು ಆಕಾಶವಾಣಿ ಪ್ರಸಾರ ಮಾಡುತ್ತಿದೆ. ಇಂದು ಇಂಡಿಯಾ ಸೆಮಿಕಂಡಕ್ಟರ್ ಮಿಷನ್ - ೨೦೨೧ರ ಕುರಿತ ಒಂದು ನೋಟ. ೨೦೨೧ ರ ಜಾಗತಿಕ ಚಿಪ್ ಕೊರತೆಯು, ವಾಹನ ಹಾಗೂ ವಿದ್ಯುನ್ಮಾನ ಉತ್ಪಾದನಾ ರಂಗಗಳ ಮೇಲೆ ಭಾರಿ ಪ್ರಭಾವ ಬೀರಿದ ಹಿನ್ನೆಲೆಯಲ್ಲಿ, ಭಾರತ, ವಿದೇಶಿ ಪೂರೈಕೆ ಸರಪಳಿಯ ಮೇಲಿನ ತನ್ನ ಅವಲಂಬನೆಯನ್ನು ತಗ್ಗಿಸಲು ೭೬ ಸಾವಿರ ಕೋಟಿ ರೂಪಾಯಿಗಳ ವೆಚ್ಚದ 'ಸೆಮಿಕಾನ್ ಇಂಡಿಯಾ' ಯೋಜನೆಗೆ ಡಿಸೆಂಬರ್ ೨೧, ೨೦೨೧ ರಂದು ಚಾಲನೆ ನೀಡಿತು. ಈ ಬೃಹತ್ ಯೋಜನೆಯ ಉಸ್ತುವಾರಿ ಹಾಗೂ ಅನುಷ್ಠಾನಕ್ಕಾಗಿ 'ಇಂಡಿಯಾ ಸೆಮಿಕಂಡಕ್ಟರ್ ಮಿಷನ್' ಆರಂಭಿಸಲಾಯಿತು. ಸ್ಮಾರ್ಟ್ ಫೋನ್‌ಗಳು ಲ್ಯಾಪ್ ಟಾಪ್ ಗಳು, ಟಿವಿಗಳು ಮತ್ತು ಕಾರುಗಳಿಂದ ಹಿಡಿದು ವೈದ್ಯಕೀಯ ಉಪಕರಣಗಳವರೆಗೂ ಎಲ್ಲದರಲ್ಲೂ ಚಿಪ್‌ಗಳ ರೂಪದಲ್ಲಿ ಸೆಮಿಕಂಡಕ್ಟರ್ ಬಳಸಲಾಗುತ್ತದೆ. ಕೃತಕ ಬುದ್ಧಿಮತ್ತೆ ೫ಜಿ ನೆಟ್‌ವರ್ಕ್ ಮತ್ತು ಕ್ವಾಂಟಮ್ ಕಂಪ್ಯೂಟಿಂಗ್‌ಗೆ ಸೆಮಿಕಂಡಕ್ಟರ್‌ಗಳು ಅತ್ಯಗತ್ಯವಾಗಿದೆ.

***********

ಅಂತಾರಾಷ್ಟ್ರೀಯ ಕಡಲ ತೀರ ಸ್ವಚ್ಚತಾ ದಿನದ ಅಂಗವಾಗಿ ಕೇಂದ್ರ ಸರ್ಕಾರದ ಭೂ ವಿಜ್ಞಾನ ನಿರ್ದೇಶನಾಲಯ, ರಾಷ್ಟ್ರೀಯ ಮಹಾಸಾಗರಗಳ ತಾಂತ್ರಿಕ ಸಂಶೋಧನಾ ಸಂಸ್ಥೆಯೊಂದಿಗೆ ನಾಳೆ ಉತ್ತರಕನ್ನಡ ಜಿಲ್ಲೆಯ ಹೊನ್ನಾವರದ ಕಾಸರಕೋಡ ಟೊಂಕಾ ಕಡಲತೀರದಲ್ಲಿ 'ಸ್ವಚ್ಛ ಸಾಗರ ಸುರಕ್ಷಿತ ಸಾಗರ' ಅಭಿಯಾನ ಹಮ್ಮಿಕೊಂಡಿದೆ. ಅಭಿಯಾನದ ಸಂಯೋಜಕ, ವಿಜ್ಞಾನಿ ಡಾ.ಪ್ರಕಾಶ ಮೆಸ್ತಾ, ಆಕಾಶವಾಣಿಯೊಂದಿಗೆ ಮಾತನಾಡಿ, ಸ್ವಚ್ಛ ಸಾಗರದ ಕಲ್ಪನೆಯ ಜೊತೆಗೆ ಸಮುದ್ರ ಕಸದ ವೈಜ್ಞಾನಿಕ ವಿಶ್ಲೇಷಣೆಯು ಈ ಅಭಿಯಾನದ ಮುಖ್ಯ ಉದ್ದೇಶ ಎಂದು ತಿಳಿಸಿದ್ದಾರೆ.

***********